# Akashvani : Bangalore
# Regional Bulletin In Kannada
# 28.06.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ದಸರಾ ಆಚರಣೆಗೆ ಕಳೆದ ವರ್ಷಕ್ಕಿಂತ ಹೆಚ್ಚು ಅನುದಾನ ; ಮುಖ್ಯಮಂತ್ರಿ ಸ್ಪಷ್ಟನೆ

೨. ಉದ್ಯಮಗಳ ಬೆಳವಣಿಗೆ, ಉದ್ಯೋಗ ಸೃಷ್ಟಿಗೆ ನೆರವು ನೀಡಲು ಸರ್ಕಾರ ಬದ್ಧ ; ಉಪಮುಖ್ಯಮಂತ್ರಿ ಭರವಸೆ

೩. ತುರ್ತು ಪರಿಸ್ಥಿತಿ ಬಗ್ಗೆ ಕಾಂಗ್ರೆಸ್ ನಾಯಕರು ಸ್ಪಷ್ಟನೆ ನೀಡುವಂತೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆಗ್ರಹ

೪. ನಾಳೆ ಮನ್-ಕಿ-ಬಾತ್‌ನಲ್ಲಿ ದೇಶ ಮತ್ತು ವಿದೇಶದ ಭಾರತೀಯರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು

<><*<><>*><>

ವಿಜ್ರಂಭಣೆ ರಭಸದಲ್ಲಿ ದಸರಾದ ಚಾರಿತ್ರಿಕ ಮಹತ್ವ ಮರೆಯಾಗಬಾರದು. ಅನಗತ್ಯವಾಗಿ ಹಣ ಖರ್ಚು ಮಾಡುವುದು ವೈಭವ ಅಲ್ಲ. ಜನರ, ಪ್ರವಾಸಿಗರ ಸುರಕ್ಷತೆ ಮತ್ತು ಅನುಕೂಲಕ್ಕೆ ಪ್ರಥಮ ಆದ್ಯತೆ ಇರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದರು. ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಾಡಹಬ್ಬ ಮೈಸೂರು ದಸರಾ-೨೦೨೫ ಆಚರಣೆ ಕುರಿತು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರದ ಸಾಧನೆಗಳು, ಪ್ರತೀ ಇಲಾಖೆಯಲ್ಲೂ ಜಾರಿ ಮಾಡಿರುವ ಜನಪರ ಕಾರ್ಯಕ್ರಮಗಳು ಜನರಿಗೆ ಸಮರ್ಪಕವಾಗಿ ಮನವರಿಕೆ ಆಗುವ ರೀತಿಯಲ್ಲಿ ಯೋಜನೆ ರೂಪಿಸಬೇಕು ಎಂದು ತಿಳಿಸಿದರು. ಸೆಪ್ಟೆಂಬರ್ ೨೨ರಂದು ದಸರಾ ಹಬ್ಬಕ್ಕೆ ಚಾಲನೆ ದೊರೆಯಲಿದ್ದು, ಅಕ್ಟೋಬರ್ ೨ರಂದು ವಿಜಯದಶಮಿ, ಜಂಬೂ ಸವಾರಿ ನಡೆಯಲಿದೆ. ದಸರಾ ಈ ಬಾರಿ ೧೦ದಿನಗಳ ಬದಲು ೧೧ದಿನಗಳ ಕಾಲ ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಳೆದ ವರ್ಷ ದಸರಾ ಆಚರಣೆಗೆ ಒಟ್ಟು ೪೦ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿತ್ತು. ಈ ಬಾರಿ ಅದ್ದೂರಿಯಾಗಿ ದಸರಾ ಆಚರಣೆಗೆ ಬೇಕಾದಷ್ಟು ಅನುದಾನವನ್ನು ಒದಗಿಸಲಾಗುವುದು. ಸರ್ಕಾರದ ಸಾಧನೆಗಳನ್ನು ಮತ್ತು ಇಲಾಖಾ ಕಾರ್ಯಕ್ರಮಗಳನ್ನು ಸರಿಯಾಗಿ ಪ್ರತಿಬಿಂಬಿಸುವಂತಹ ವಸ್ತು ಪ್ರದರ್ಶನ, ಸ್ತಬ್ಧಚಿತ್ರ ಪ್ರದರ್ಶನ ಆಯೋಜಿಸಬೇಕು. ಅಕ್ಟೋಬರ್ ೨ರಂದು ವಿಜಯದಶಮಿ ಬಂದಿರುವ ಕಾರಣ ಸ್ತಬ್ಧ ಚಿತ್ರಗಳಲ್ಲಿ ಗಾಂಧೀಜಿ ವಿಚಾರಧಾರೆಗಳಿಗೆ ಸಹ ಅವಕಾಶ ಕಲ್ಪಿಸಬೇಕು ಎಂದು ಅವರು ಹೇಳಿದರು. ದಸರಾ ಸಂದರ್ಭದಲ್ಲಿ ಜನದಟ್ಟಣೆ ನಿಯಂತ್ರಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ೧೦ಲಕ್ಷಕ್ಕೂ ಹೆಚ್ಚು ಮಂದಿ ಸೇರುವ ಸಂದರ್ಭ ಇದಾಗಿದೆ. ವಿದೇಶಿಗರೂ ಹೆಚ್ಚಿನ ಪ್ರಮಾಣದಲ್ಲಿ ಆಗಮಿಸುತ್ತಾರೆ. ಯಾವುದೇ ಕಾರಣಕ್ಕೂ ಅನಾಹುತ ಸಂಭವಿಸದಂತೆ ಎಲ್ಲಾ ಕಡೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

<><*<><>*><>

ಸಣ್ಣ ಕೈಗಾರಿಕೆಗಳು ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಕೈಗಾರಿಕೆಗಳ, ಉದ್ಯಮಗಳ ಬೆಳವಣಿಗೆಗೆ ಹಾಗೂ ಉದ್ಯೋಗ ಸೃಷ್ಟಿಗೆ ಪೂರಕವಾದ ಎಲ್ಲ ರೀತಿಯ ಸಹಕಾರ ಮತ್ತು ನೆರವನ್ನು ನೀಡಲು ನಮ್ಮ ಸರ್ಕಾರ ಸದಾ ಸಿದ್ಧವಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಡಾಬಸ್ ಪೇಟೆಯ ಕೈಗಾರಿಕಾ ಪ್ರದೇಶದಲ್ಲಿ ನಿರ್ಮಿಸಿರುವ ಕಾಸಿಯಾ ಶ್ರೇಷ್ಠತಾ ಮತ್ತು ನಾವೀನ್ಯತಾ ಕೇಂದ್ರ ಮತ್ತು ವಸ್ತು ಪ್ರದರ್ಶನ ಕೇಂದ್ರದ ನೂತನ ಕಟ್ಟಡಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾಗತಿಕ ಮಟ್ಟದಲ್ಲಿ ಆಗುತ್ತಿರುವ ತಂತ್ರಜ್ಞಾನದ ಪ್ರಗತಿಯನ್ನು ನಮ್ಮ ರಾಜ್ಯದಲ್ಲಿ ಅಳವಡಿಸಿಕೊಳ್ಳುತ್ತಿದ್ದು, ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಗಳನ್ನು ಸೃಷ್ಟಿಸುವುದು ಸರ್ಕಾರದ ಗುರಿಯಾಗಿದೆ ಎಂದು ತಿಳಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಮಾತನಾಡಿ, ಕೇಂದ್ರದಲ್ಲಿ ತಾನು ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಮಂತ್ರಿ ಆಗಿದ್ದಾಗ ಅಂದು ಭಾರತದಾದ್ಯಂತ ೨೦ ತಂತ್ರಜ್ಞಾನದ ತರಬೇತಿ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದ್ದು, ಇವುಗಳಲ್ಲಿ ಸ್ಥಳೀಯಯರಿಗೆ ಮೊದಲ ಆದ್ಯತೆ ಕೊಡಬೇಕಿದೆ ಎಂದು ಹೇಳಿದರು.

<><*<><>*><>

ದೇಶದಲ್ಲಿ ೧೯೭೫ರಲ್ಲಿ ತುರ್ತು ಪರಿಸ್ಥಿತಿ ಹೇರಿದ್ದ ಬಗ್ಗೆ ಕಾಂಗ್ರೆಸ್ ನಾಯಕರು ಸ್ಪಷ್ಟನೆ ನೀಡಬೇಕಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ. ಇಂದು ಮೈಸೂರಿನಲ್ಲಿ ಬಿಜೆಪಿ ವತಿಯಿಂದ ತುರ್ತು

ಪರಿಸ್ಥಿತಿ ಕರಾಳ ದಿನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್  ಪಕ್ಷಕ್ಕೆ ಸಂವಿಧಾನದ ಬಗ್ಗೆ ಗೌರವವಿದ್ದರೆ ೧೯೭೫ ರಲ್ಲಿ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಹೇರಿದ್ದ ತುರ್ತು ಪರಿಸ್ಥಿತಿಯ ಪರವೋ-ವಿರೋಧವೋ ತಿಳಿಸಬೇಕಿದೆ ಎಂದರು. ಆಗಿನ ತುರ್ತು ಪರಿಸ್ಥಿತಿಯಲ್ಲಿ ಅಮಾಯಕ ದೇಶ ಪ್ರೇಮಿಗಳು ಸಾವನ್ನಪ್ಪಿದ್ದಾರೆ, ಅನೇಕ ಮಂದಿಯನ್ನು ಜೈಲಿಗೆ ಕಳುಹಿಸಲಾಗಿತ್ತು. ಸಮಾಜವಾದದ ಜಯಪ್ರಕಾಶ್ ನಾರಾಯಣ ಸೇರಿದಂತೆ ಅನೇಕ ಮಂದಿಯನ್ನು ಜೈಲಿಗೆ ಕಳುಹಿಸಲಾಗಿತ್ತು ಇದು ಒಂದು ಕರಾಳದಿನವಾಗಿದೆ ಎಂದು ಹೇಳಿದರು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ.  ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೩ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ.  ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ನೀವು ಈ ಕಾರ್ಯಕ್ರಮವನ್ನು ಕೇಳಬಹುದು.

<><*<><>*><>

ನೆರೆಯ ಮಹಾರಾಷ್ಟ್ರದಲ್ಲಿ ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿನ ನದಿಗಳು ಉಕ್ಕಿ ಹರಿಯುತ್ತಿವೆ.  ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಸಂಭವಿಸಬಹುದಾದ ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್  ಸೂಚನೆ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು, ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯಲ್ಲಿ ಮಾತನಾಡಿದ ಅವರು, ಪ್ರವಾಹ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ನೋಡಲ್ ಅಧಿಕಾರಿಗಳು ನಿಯಮಿತವಾಗಿ ಸಭೆಗಳನ್ನು ಜರುಗಿಸಿ ಪ್ರವಾಹ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

<><*<><>*><>

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದೆ. ಇಂದು ಬೆಳಿಗ್ಗೆಯಿಂದ ೩೦ ಕ್ರಸ್ಟ್ ಗೇಟ್‌ಗಳ ಮುಖಾಂತರ ೮೪ ಸಾವಿರದ ೪೪೫ ಕ್ಯುಸೆಕ್ ನೀರನ್ನು ಕೃಷ್ಣಾ ನದಿಗೆ ಹರಿಸಲಾಗುತ್ತಿದೆ. ಸಂಜೆ ಹೆಚ್ಚಿನ ಪ್ರಮಾಣದಲ್ಲಿ ನೀರು ಬಸವಸಾಗರ ಜಲಾಶಯಕ್ಕೆ ಹರಿದು ಬರುವ ಸಾಧ್ಯತೆಯಿರುವ ಮಾಹಿತಿ ಲಭ್ಯವಾಗಿದ್ದರಿಂದಾಗಿ ೧ ಲಕ್ಷದ ೧೦ ಸಾವಿರ ಕ್ಯೂಸೆಕ್ ನೀರು ಕೃಷ್ಣಾ ನದಿಗೆ ಹರಿಸಲಾಗುವುದಾಗಿ ಬಸವಸಾಗರ ಜಲಾಶಯದ ಮುಖ್ಯ ಅಭಿಯಂತರ ಆರ್.ಮಂಜುನಾಥ್ ತಿಳಿಸಿದ್ದಾರೆ.  ನಾರಾಯಣಪುರ ಅಣೆಕಟ್ಟಿನ ಕೆಳಭಾಗದಲ್ಲಿರುವ ನದಿ ಪಾತ್ರದ ಜನ, ಜಾನುವಾರು ಜಾಗ್ರತೆಯಿಂದ ಇರಲು ಎಚ್ಚರಿಕೆ ನೀಡಲಾಗಿದೆ.

<><*<><>*><>

ನಾಗಾಲ್ಯಾಂಡ್ ಮುಖ್ಯಮಂತ್ರಿ ನೀಫಿಯು ರಿಯೊ ತಮ್ಮ ಎರಡು ದಿನಗಳ ಪ್ರವಾಸದಲ್ಲಿ ಬಳ್ಳಾರಿ ಜಿಲ್ಲೆಯ ಜೆಎಸ್‌ಡಬ್ಲ್ಯೂ ಸಂಸ್ಥೆಯ ವಿವಿಧ ಅಭಿವೃದ್ಧಿ ಕಾರ್ಯಗಳ ವೀಕ್ಷಣೆ ಮಾಡುತ್ತಿದ್ದಾರೆ. ಇಂದು ಬಳ್ಳಾರಿ ಜಿಲ್ಲೆ ಸಂಡೂರು ತಾಲೂಕಿನ ತೋರಣಗಲ್ಲಿನ ಓಪಿಜೆ ಕೇಂದ್ರದಲ್ಲಿನ ಉತ್ತರ ಕರ್ನಾಟಕದ ಅತಿದೊಡ್ಡ ಮಹಿಳಾ ಬಿಪಿಓ, ಜೆಎಸ್‌ಡಬ್ಲ್ಯೂ ಶಕ್ತಿ, ಸಖಿ, ಬುಂಕೈ ಮತ್ತು ಸುರಕ್ಷತಾ ಕೇಂದ್ರ ವೀಕ್ಷಣೆ ಮಾಡಿದರು.

<><*<><>*><>

ತುಂಗಭದ್ರಾ ಜಲಾಶಯದಿಂದ ೨೫ ಸಾವಿರ ಕ್ಯೂಸೆಕ್ ನೀರನ್ನು ಯಾವುದೇ ಕ್ಷಣದಲ್ಲಿ ನದಿಗೆ ಬಿಡಬಹುದು. ನದಿ ದಂಡೆಯ ನಿವಾಸಿಗಳು ಎಚ್ಚರಿಕೆಯಿಂದ ಇರಬೇಕು ಎಂದು ತುಂಗಭದ್ರಾ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ. ತುಂಗಾ, ಭದ್ರಾ, ವರದಾ ನದಿ ಪಾತ್ರದ ಪ್ರದೇಶದಲ್ಲಿ ಸತತವಾಗಿ ಮಳೆ ಸುರಿಯುತ್ತಿರುವುದರಿಂದ ತುಂಗಭದ್ರಾ ಜಲಾಶಯಕ್ಕೆ ೬೦ ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಈ ಪ್ರಮಾಣ ಹೆಚ್ಚುವ ಸಾಧ್ಯತೆ ಇದ್ದು, ತುಂಗಭದ್ರಾ ಜಲಾಶಯದಿಂದ ನದಿಗೆ ನೀರು ಬಿಡುವ ಸಾಧ್ಯತೆ ಇದೆ ಎಂದು ಮಂಡಳಿ ಹೇಳಿದೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತೆ ವಿಭಾಗದ ಅಂಕಿತಾಧಿಕಾರಿ ಹಾಗೂ ಆಹಾರ ಸುರಕ್ಷತಾಧಿಕಾರಿಗಳು ವಿಶೇಷ ಅಂದೋಲನ ನಡೆಸುವ ಮೂಲಕ ನಿಯಮ ಮೀರಿದವರಿಗೆ ದಂಡ ವಿಧಿಸಿ, ಆಹಾರ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾಲ್ಕು ತಾಲ್ಲೂಕಿನ ವ್ಯಾಪ್ತಿಯಲ್ಲಿ ೩೨ ಬೀದಿ ಬದಿ ಆಹಾರ ವ್ಯಾಪಾರ ಮಳಿಗೆಗಳಿಗೆ ಭೇಟಿ ನೀಡಿ

ಪರಿಶೀಲನೆ ನಡೆಸಿ ಐವರಿಗೆ ನೋಟೀಸ್ ನೀಡಿ, ೫ ಸಾವಿರದ ೫೦೦ ರೂಪಾಯಿ ದಂಡ ವಿಧಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಆಹಾರ ಸುರಕ್ಷತೆಯ ಅಂಕಿತಾಧಿಕಾರಿ ಡಾ. ಧರ್ಮೇಂದ್ರ .ಬಿ ತಿಳಿಸಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಹೊಸಪೇಟೆ ನಗರದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣದಲ್ಲಿ ಸರ್ಕಾರದ ಯೋಜನೆಗಳು ಮತ್ತು ಸಾಧನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನಕ್ಕೆ ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಚಾಲನೆ ನೀಡಿದರು.

೨. ಪ್ರತಿಯೊಬ್ಬರೂ ಪರಿಸರ ಸಂರಕ್ಷಿಸುವ ಮೂಲಕ ಮುಂದಿನ ಪೀಳಿಗೆಗೆ ಪರಿಸರವನ್ನು ಉಳಿಸಬೇಕು ಎಂದು ಹಾಸನ ಪ್ರದಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ ತಿಳಿಸಿದರು. ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ನಡೆದ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಗಿಡ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**